ಭೂ ಒಡೆತನ ಯೋಜನೆ ಅಡಿ ಫಲಾನುಭವಿಗಳ ಆಯ್ಕೆ

843 (1025) ಶ್ರೀ ಚಿಕ್ಕನಗೌಡ್ರ ಸಿದ್ಧನಗೌಡ ಈಶ್ವರಗೌಡ (ಕುಂದಗೋಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಡಿಯಲ್ಲಿ ಭೂ ಒಡೆತನ ಯೋಜನೆಯಡಿಯಲ್ಲಿ ಫಲಾನುಭವಿಗಳ ಆಯ್ಕೆ ಮಾನದಂಡಗಳೇನು;

ಆ) ಸುಮಾರು 2000–01ನೇ ಸಾಲಿನಿಂದ ಇಲ್ಲಿಯವರೆಗೆ ಆಯ್ಕೆ ಮಾಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು;

ಇ) ಆಯ್ಕೆಯಾಗಿರುವ ಎಲ್ಲಾ ಫಲಾನುಭವಿಗಳಿಗೆ ಜಮೀನು ನೀಡಲಾಗಿದೆಯೇ;

ಈ) ಜಮೀನು ನೀಡಿದ್ದಲ್ಲಿ, ಈಗ ಸದ್ಯ ಫಲಾನುಭವಿಗಳೇ ಉಪಯೋಗಿಸುತ್ತಿದ್ದಾರೆಯೇ ಅಥವಾ ಬೇರೆಯವರು ಉಪಯೋಗ ಮಾಡುತ್ತಿದ್ದಾರೆಯೇ;

ಉ) ಜಮೀನು ಪಡೆದ ಫಲಾನುಭವಿಗಳು ನಂತರ ಬೇರೆಯವರಿಗೆ ಮಾರಾಟ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ)

1) ಫಲಾನುಭವಿಗಳು ಪರಿಶಿಷ್ಟ ಜಾತಿಗೆ ಸೇರಿರಬೇಕು

2) 18 ರಿಂದ 60 ವರ್ಷ ವಯೋಮಿತಿಯಲ್ಲಿರಬೇಕು

3) ಭೂ ರಹಿತ ಕೃಷಿ ಕಾರ್ಮಿಕ ಮಹಿಳೆಯಾಗಿರಬೇಕು

4) ಫಲಾನುಭವಿಯು ಸುಸ್ತಿದಾರರಾಗಿರಬಾರದು

ಆ) ಪರಿಶಿಷ್ಟ ಜಾತಿಯ 339 ಮತ್ತು ಪರಿಶಿಷ್ಟ ವರ್ಗದ 56 (2006–07ನೇ ಸಾಲಿನ ಅಂತ್ಯದವರೆಗೆ), ಒಟ್ಟು 395 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ.

ಇ) ಹೌದು.

ಈ) ಜಮೀನನ್ನು ಫಲಾನುಭವಿಗಳೇ ಉಪಯೋಗಿಸುತ್ತಿದ್ದಾರೆ.

ಉ) ಇಲ್ಲ.

ಊ) ಅನ್ವಯಿಸುವುದಿಲ್ಲ.

ಕೆಂಪೇಗೌಡ ಬಸ್ ನಿಲ್ದಾಣದ ನಿಲುಗಡೆ ಮಾಹಿತಿ

845 (1375) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಕೆಂಪೇಗೌಡ ಬಸ್ ನಿಲ್ದಾಣದ ಸುತ್ತಮುತ್ತಲು ಖಾಸಗಿ ಬಸ್ ನಿಲುಗಡೆ ಅವಕಾಶ ಕಲ್ಪಿಸಲಾಗಿರುತ್ತದೆಯೇ?

ಆ) ಕೇಂದ್ರ ಬಸ್ ನಿಲ್ದಾಣದಿಂದ 3 ಕಿ.ಮೀ. ದೂರದಲ್ಲಿ ಖಾಸಗಿ ಬಸ್ ನಿಲುಗಡೆಗೆ ಸ್ಥಳವನ್ನು ಗುರುತಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೇಯೇ?

ಇ) ಇಲ್ಲದಿದ್ದಲ್ಲಿ ಖಾಸಗಿ ಬಸ್‌ಗಳಿಂದಾಗುವ ಸಂಚಾರ ಅಡಚಣೆಯನ್ನು ಯಾವ ರೀತಿ ಪರಿಹರಿಸಲು ಸರ್ಕಾರವು ಯೋಜಿಸಿದೆ?

ಈ) ಯಾವಾಗ ಈ ಸಮಸ್ಯೆಯನ್ನು ಪರಿಹರಿಸಲಾಗುವುದು?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು) :

ಅ) ಇಲ್ಲ.

ಆ) ಪ್ರಸ್ತಾವನೆ ಇರುವುದಿಲ್ಲ.

ಇ) ಮತ್ತು ಈ) ಈ ಬಗ್ಗೆ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಯನ್ನು ಕೋರಲಾಗುವುದು.

ಆರ್.ಟಿ.ಓ. ಚೆಕ್‌ಪೋಸ್ಟ್‌ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಾಹಿತಿ

846 (966) ಡಾ: ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಸಾರಿಗೆ ಇಲಾಖೆಯ ತಪಾಸಣೆ ಠಾಣೆ (ಆರ್.ಟಿ.ಓ. ಚೆಕ್‌ಪೋಸ್ಟ್)ಗಳಿವೆ; ಈ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೋಟಾರು ವಾಹನ ನಿರೀಕ್ಷಕರು ಮತ್ತು ಹಿರಿಯ ಮೋಟಾರು ವಾಹನ ನಿರೀಕ್ಷಕರು ಯಾರು ಯಾರು; ಇವರು ಯಾವ ದಿನಾಂಕದಿಂದ ಈ ಸ್ಥಳದಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು;